**Akashvani : Bangalore**
**Regional Bulletin In Kannada**
**25.03.2024 / 14.30 hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**25.03.2024 / 14.30 hrs**
**<><*<><>*><>**

<u>ಮುಖ್ಯಾಂಶಗಳು</u>

೧. ಎಸ್‌ಎಸ್‌ಎಲ್‌ಸಿ ಪರೀಕ್ಷೆ ಆರಂಭ; ೨ ಸಾವಿರದ ೭೫೦ ಕೇಂದ್ರಗಳಲ್ಲಿ ಸುಗಮ ಪರೀಕ್ಷೆ

೨. ಲೋಕಸಭಾ ಚುನಾವಣೆ; 'ಮತದಾರರ ಸಹಾಯವಾಣಿ ಆಪ್' ಬಗ್ಗೆ ಮಾಹಿತಿ

೩. ಮತಕ್ಷೇತ್ರ ದರ್ಶನ; ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರದ ಪರಿಚಯ

೪. ಇಂದು ಹೋಳಿಹಬ್ಬ; ಗಣ್ಯರ ಶುಭಾಶಯ

**<><*<><>*><>**

ವಿದ್ಯಾರ್ಥಿ ಜೀವನದಲ್ಲಿ ಶಾಲಾ ಶಿಕ್ಷಣ ಪೂರ್ಣಗೊಳ್ಳುವ ಹಂತವಾದ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ರಾಜ್ಯಾದ್ಯಂತ ಆರಂಭವಾಗಿವೆ. ಇಂದಿನಿಂದ ಏಪ್ರಿಲ್ ೬ರವರೆಗೆ ವಿಷಯವಾರು ಪರೀಕ್ಷೆಗಳು ನಿಗದಿಯಾಗಿವೆ. ಈ ಬಾರಿ ೮ ಲಕ್ಷದ ೬೯ ಸಾವಿರ ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದಾರೆ. ಈ ಪೈಕಿ ೪ ಲಕ್ಷ ೪೧ ಸಾವಿರದ ೯೧೦ ಬಾಲಕರು ಮತ್ತು ೪ ಲಕ್ಷ ೨೮ ಸಾವಿರದ ೫೮ ಬಾಲಕಿಯರು ಸೇರಿದ್ದಾರೆ. ಇಂದು ಪ್ರಥಮ ಭಾಷೆ ಕನ್ನಡ ಪರೀಕ್ಷೆ ನಡೆಯಿತು. ರಾಜ್ಯದ ೨ ಸಾವಿರದ ೭೫೦ ಕೇಂದ್ರಗಳಲ್ಲಿ ಪರೀಕ್ಷೆ ನಡೆಯುತ್ತಿದ್ದು, ಕನ್ನಡ, ಇಂಗ್ಲಿಷ್, ಹಿಂದಿ, ತೆಲುಗು, ತಮಿಳು, ಉರ್ದು, ಮರಾಠಿ ಸೇರಿದಂತೆ ಏಳು ಮಾಧ್ಯಮಗಳಲ್ಲಿ ಪರೀಕ್ಷೆ ಬರೆಯಲು ಅವಕಾಶ ನೀಡಲಾಗಿದೆ ಎಂದು ಮೌಲ್ಯ ನಿರ್ಣಯ ಮಂಡಳಿ ತಿಳಿಸಿದೆ.ಪರೀಕ್ಷಾ ಅಕ್ರಮಗಳಿಗೆ ಅವಕಾಶವಾಗದಂತೆ ಜಿಲ್ಲಾಧಿಕಾರಿಗಳ ಹಂತದಲ್ಲಿ ವಿಚಕ್ಷಣಾ ಜಾಗೃತಾದಳಗಳು ಕಾರ್ಯ ನಿರ್ವಹಿಸುತ್ತಿವೆ. ಪರೀಕ್ಷೆ ನಡೆಯುವ ಎಲ್ಲ ಕೇಂದ್ರಗಳಿಗೂ ಸೂಕ್ತ ಭದ್ರತೆ ಒದಗಿಸಲಾಗಿದೆ. ಪರೀಕ್ಷೆ ನಡೆಯುವ ಎಲ್ಲ ಕೇಂದ್ರಗಳ ಸುತ್ತಮುತ್ತ ೨೦೦ ಮೀಟರ್ ವ್ಯಾಪ್ತಿಯಲ್ಲಿ ಪ್ರತಿಬಂಧಕಾಜ್ಞೆ ಜಾರಿಯಲ್ಲಿರುತ್ತದೆ. ನಕಲು ಮಾಡಲು ಅವಕಾಶವಾಗದಂತೆ ಪರೀಕ್ಷಾ ಕೊಠಡಿಗಳಲ್ಲಿ ಸಿಸಿಟಿವಿ ಮೂಲಕ ನಿಗಾ ಇಡಲಾಗಿದೆ. ಪರೀಕ್ಷಾ ಕೇಂದ್ರಗಳ ಸಮೀಪವಿರುವ ಕಂಪ್ಯೂಟರ್ ಸೆಂಟರ್ ಮತ್ತು

ಜೆರಾಕ್ಸ್ ಅಂಗಡಿಗಳನ್ನು ಮುಚ್ಚಲು ಆದೇಶ ನೀಡಲಾಗಿದೆ. ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಪರೀಕ್ಷಾ ಸಿಬ್ಬಂದಿ ಮೊಬೈಲ್ ಬಳಸುವಂತಿಲ್ಲ. ಪರೀಕ್ಷೆ ಬರೆಯುವ ದೃಷ್ಟಿ ವಿಶೇಷ ವಿಕಲಚೇತನ ವಿದ್ಯಾರ್ಥಿಗಳಿಗಾಗಿ ಲಿಪಿಕಾರರ ನೆರವು ಪಡೆಯಲಾಗುತ್ತಿದೆ. ಎಸ್.ಎಸ್.ಎಲ್.ಸಿ ಪರೀಕ್ಷೆ ಎದುರಿಸುತ್ತಿರುವ ನಾಡಿನ ವಿದ್ಯಾರ್ಥಿಗಳಿಗೆ ಶುಭ ಹಾರೈಕೆಗಳು. ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸಿ, ಉತ್ತಮ ಅಂಕಗಳ ಜೊತೆಗೆ ಉಜ್ವಲ ಭವಿಷ್ಯ ನಿಮ್ಮದಾಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಮಾಧ್ಯಮದ ಮೂಲಕ ಶುಭಾಶಯ ಕೋರಿದ್ದಾರೆ. ಶೈಕ್ಷಣಿಕ ಜೀವನದ ಅತ್ಯಂತ ಮಹತ್ವದ ಘಟ್ಟವಾದ  ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬರೆಯುತ್ತಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಶುಭ ಹಾರೈಕೆಗಳು. ಯಾವುದೇ ಭಯ, ಆತಂಕ ಅಥವಾ ಉದ್ವೇಗಕ್ಕೆ ಒಳಗಾಗದೆ ಪರೀಕ್ಷೆ ಬರೆಯಿರಿ. ಉಜ್ವಲ ಭವಿಷ್ಯ ನಿಮ್ಮದಾಗಲಿ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಂದೇಶ ನೀಡಿದ್ದಾರೆ. ರಾಜ್ಯಾದ್ಯಂತ ಪರೀಕ್ಷೆ ಸುಗಮವಾಗಿ ನಡೆದ ಬಗ್ಗೆ ವರದಿಗಳು ಬಂದಿವೆ. ಉತ್ತರ ಕನ್ನಡ ಜಿಲ್ಲೆಯಲ್ಲಿ ಪರೀಕ್ಷೆ ವ್ಯವಸ್ಥಿತವಾಗಿ ನಡೆಯಿತು. ಪರೀಕ್ಷೆಯನ್ನು ಪಾರದರ್ಶಕವಾಗಿ ಹಾಗೂ ವಿದ್ಯಾರ್ಥಿಗಳಿಗೆ ಆತಂಕವಿಲ್ಲದೆ ಪರೀಕ್ಷೆ ಬರೆಯಲು ಅನುಕೂಲವಾಗುವಂತೆ ನಡೆಸಲು ಎಸ್‌ಎಸ್‌ಎಲ್‌ಸಿ ಮಂಡಳಿ ಸೂಚಿಸಿರುವ ಎಲ್ಲ ವ್ಯವಸ್ಥೆಗಳನ್ನು ಕಲ್ಪಿಸಲಾಗಿದೆ ಎಂದು ಶಿರಸಿ ಡಿಡಿಪಿಐ ಪಿ.ಬಸವರಾಜು ತಿಳಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯ ೫೦ ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯಾರ್ಥಿಗಳು ಇಂದು ಮೊದಲ ದಿನದ ಪರೀಕ್ಷೆ ಬರೆದರು. ಈ ಬಾರಿ ೧೪ ಸಾವಿರದ ೧೪ ವಿದ್ಯಾರ್ಥಿಗಳು ಜಿಲ್ಲೆಯಲ್ಲಿ ಈ ಪರೀಕ್ಷೆ ತೆಗೆದುಕೊಂಡಿದ್ದಾರೆ. ದಾವಣಗೆರೆ ಜಿಲ್ಲೆಯಲ್ಲಿ ಒಟ್ಟು ೪೭೨ ಪ್ರೌಢಶಾಲೆಗಳಿವೆ. ೨೨ ಸಾವಿರದ ೨೭೧ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾದರು. ಜಿಲ್ಲೆಯಲ್ಲಿ ೮೪ ಪರೀಕ್ಷಾ ಕೇಂದ್ರಗಳನ್ನು ತೆರೆಯಲಾಗಿತ್ತು. ಈ ನಡುವೆ ೫, ೮ ಮತ್ತು ೯ನೇ ತರಗತಿಯ ವಿದ್ಯಾರ್ಥಿಗಳಿಗೆ ಇಂದಿನಿಂದಲೇ ಬೋರ್ಡ್ ಪರೀಕ್ಷೆಗಳು ಮತ್ತೆ ನಡೆಯುತ್ತಿವೆ. ಹೈಕೋರ್ಟ್ ತೀರ್ಪಿನ ಹಿನ್ನೆಲೆಯಲ್ಲಿ ಈ ತರಗತಿಗಳಿಗೆ ಬಾಕಿ ಉಳಿದಿದ್ದ ಪರೀಕ್ಷೆಗಳನ್ನು ನಡೆಸಲಾಗುತ್ತಿದೆ.

**<><*<><>*><>**

೧೮ನೇ ಲೋಕಸಭೆಗೆ ಸದಸ್ಯರನ್ನು ಆಯ್ಕೆ ಮಾಡಲು ನಡೆಯಲಿರುವ ಸಾರ್ವತ್ರಿಕ ಚುನಾವಣೆಗೆ ಭಾರತ ಚುನಾವಣಾ ಆಯೋಗ, ಸಕಲ ಸಿದ್ಧತೆಯೊಂದಿಗೆ ಸಜ್ಜಾಗಿದೆ. ದೇಶದಲ್ಲಿ ಚುನಾವಣೆಗಳನ್ನು ಪಾರದರ್ಶಕವಾಗಿ ಹಾಗೂ ಅತ್ಯಂತ ವಿಶ್ವಾಸಾರ್ಹ ರೀತಿಯಲ್ಲಿ ನಡೆಸುವ ಸಂಕಲ್ಪದೊಂದಿಗೆ ಚುನಾವಣಾ ಆಯೋಗ, ಸಮಸ್ತ ಚುನಾವಣಾ ಪ್ರಕ್ರಿಯೆಗಳನ್ನು ಸುಗಮಗೊಳಿಸಲು ತಂತ್ರಜ್ಞಾನದ ನೆರವನ್ನು ಬಳಸಿಕೊಳ್ಳುತ್ತಿದೆ. ಈ ನಿಟ್ಟಿನಲ್ಲಿ ಮತದಾರರು, ಚುನಾವಣಾ ಸಿಬ್ಬಂದಿ ಹಾಗೂ ಆಯೋಗಕ್ಕೆ ನೆರವಾಗುವ ಹಲವು ಆಪ್‌ಗಳನ್ನು ಚುನಾವಣಾ ಆಯೋಗ ಅಭಿವೃದ್ಧಿಪಡಿಸಿದೆ. ಈ

ಪೈಕಿ ಇಂದು ವೋಟರ್ ಹೆಲ್ಪ್ ಲೈನ್ ಆಪ್ ಅಥವಾ ಮತದಾರರ ಸಹಾಯವಾಣಿ ಆಪ್ ಬಗ್ಗೆ ಒಂದಷ್ಟು ಮಾಹಿತಿ.

**************

ಮತದಾರರ ಅನುಕೂಲಕ್ಕಾಗಿ ಕಲ್ಪಿಸಲಾಗಿರುವ ಹಲವು ಸೇವೆಗಳ ಪೈಕಿ ಮತದಾರರ ಸಹಾಯವಾಣಿ ಆಪ್ ಕ್ರಾಂತಿಕಾರಕ ವಿಧಾನವಾಗಿದೆ. ಪ್ರಸ್ತುತ ದೇಶದಲ್ಲಿ ಮತದಾನದ ಹಕ್ಕನ್ನು ೧೮ ವರ್ಷ ತುಂಬಿದ ವ್ಯಕ್ತಿಗಳಿಗೆ ನೀಡಲಾಗುತ್ತಿದೆ. ಮೊದಲ ಬಾರಿಗೆ ಮತದಾನ ಮಾಡುವ ನವಮತದಾರರಿಗೆ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೊಂದಾಯಿಸುವುದು, ಮತದಾರರ ಪಟ್ಟಿಯಲ್ಲಿ ಈಗಾಗಲೇ ಇರುವ ವಿವರಗಳನ್ನು ಕಾಲಕಾಲಕ್ಕೆ ಅಗತ್ಯವಿರುವಂತೆ ಬದಲಾಯಿಸುವುದು, ಮತದಾರರ ಪಟ್ಟಿಯಲ್ಲಿ ನಮ್ಮ ಹೆಸರನ್ನು ಹುಡುಕುವುದು ಹಾಗೂ ಲಭ್ಯವಿರುವ ಇತರ ಚುನವಾಣಾ ಸಂಬಂಧೀ ಸೇವೆಗಳ ಬಗ್ಗೆ ಮಾಹಿತಿ ಪಡೆಯುವುದಕ್ಕೆ ಮತದಾರರ ಸಹಾಯವಾಣಿ ಆಪ್ ನೆರವಾಗಲಿದೆ. ಒಟ್ಟಿನಲ್ಲಿ ಹೇಳುವುದಾದರೆ, ಪ್ರತಿಯೊಬ್ಬ ಅರ್ಹ ಮತದಾರರಿಗೂ ಚುನಾವಣೆಯಲ್ಲಿ ಪಾಲ್ಗೊಳ್ಳುವುದನ್ನು ಸುಗಮ ಮತ್ತು ಸರಳಗೊಳಿಸುವ ಮೂಲಕ ಭಾರತದ ಚುನವಾಣಾ ಆಯೋಗದೊಂದಿಗೆ ದೇಶದ ನಾಗರಿಕನ್ನು ಒಗ್ಗೂಡಿಸುವ ಪ್ರಕ್ರಿಯೆಯನ್ನು ಈ ಆಪ್ ನಿರ್ವಹಿಸುತ್ತಿದೆ. ಇದಲ್ಲದೇ, ನಮ್ಮ ಮತದಾರರ ಗುರುತಿನ ಚೀಟಿಯ ಡಿಟಿಟಲ್ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಳ್ಳುವುದು, ಚುನಾವಣೆ ಅಕ್ರಮಗಳ ಬಗ್ಗೆ ಆಯೋಗಕ್ಕೆ ದೂರುಗಳನ್ನು ದಾಖಲಿಸುವುದು, ಚುನಾವಣೆಗೆ ಸಂಬಂಧಿಸಿದ ಹೊಸ ಹೊಸ ಸುದ್ದಿ ಮತ್ತು ಮಾಹಿತಿಯನ್ನು ಪಡೆಯಲೂ ಸಹ ಮತದಾರರ ಸಹಾಯವಾಣಿ ಆಪ್ ನೆರವಾಗುತ್ತದೆ.

<><*<><>*><>

ಮತಕ್ಷೇತ್ರ ದರ್ಶನ ವಿಭಾಗದಲ್ಲಿ ಇಂದು ದಕ್ಷಿಣಕನ್ನಡ ಲೋಕಸಭಾ ಕ್ಷೇತ್ರದ ಬಗ್ಗೆ ಮಾಹಿತಿ.

ವರದಿಯನ್ನು ಸಿದ್ಧಪಡಿಸಿರುವವರು : ನಮ್ಮ ಜಿಲ್ಲಾ ಪ್ರತಿನಿಧಿ ಸುರೇಶ್ ಡಿ ಪಳ್ಳಿ

**********

ಉನ್ನತ ಮತ್ತು ಗುಣಮಟ್ಟದ ಶಿಕ್ಷಣ ಸಂಸ್ಥೆಗಳು, ಶ್ರದ್ಧಾ ಕೇಂದ್ರಗಳು, ಸಂಸ್ಕೃತಿ, ಸಂಸ್ಕಾರ, ಭಾಷಾ ಸೌಹಾರ್ದತೆ, ಪ್ರಾಕೃತಿಕ ಸೌಂದರ್ಯ ಹಾಗೂ ಸುಂದರ ಕಡಲ ಕಿನಾರೆಯಿಂದ ಕಂಗೊಳಿಸುವ ಲೋಕಸಭಾ ಕ್ಷೇತ್ರ - ದಕ್ಷಿಣ ಕನ್ನಡ.ಒಟ್ಟು ೪ ಸಾವಿರದ ೮೬೬ ಚದರ ಕಿಲೋಮೀಟರ್ ವಿಸ್ತೀರ್ಣ ಹೊಂದಿರುವ ಈ ಕ್ಷೇತ್ರ, ೮ ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡಿದೆ. ರಾಜ್ಯದಲ್ಲಿ ಅತೀ ಹೆಚ್ಚು

ಸಾಕ್ಷರತಾ ಪ್ರಮಾಣ ಇರುವ ಕ್ಷೇತ್ರಗಳ ಪೈಕಿ ದಕ್ಷಿಣ ಕನ್ನಡ ಮುಂಚೂಣಿಯಲ್ಲಿದೆ. ೨೦೦೮ರಲ್ಲಿ ಕ್ಷೇತ್ರ ಪುನರ್‌ರಚನೆಯಾಗಿ ದಕ್ಷಿಣ ಕನ್ನಡ ಒಂದು ಲೋಕಸಭಾ ಕ್ಷೇತ್ರವಾಗಿ ಗುರುತಿಸಲ್ಪಟ್ಟಿತು. ಅದುವರೆಗೆ ಈ ಕ್ಷೇತ್ರ ಮಂಗಳೂರು ಲೋಕಸಭಾ ಕ್ಷೇತ್ರವಾಗಿತ್ತು. ೨೦೦೯ರಲ್ಲಿ ದಕ್ಷಿಣ ಕನ್ನಡ ಕ್ಷೇತ್ರದ ಮೊದಲ ಚುನಾವಣೆ ನಡೆಯಿತು. ರಾಜ್ಯಕ್ಕೆ ಇಬ್ಬರು ಮುಖ್ಯಮಂತ್ರಿಗಳನ್ನು ನೀಡಿದ ಕ್ಷೇತ್ರ ಇದಾಗಿದೆ.  ಪ್ರಸ್ತುತ ದಕ್ಷಿಣ ಕನ್ನಡ ಕ್ಷೇತ್ರ ವ್ಯಾಪ್ತಿಯಲ್ಲಿ ೨೪ ಲಕ್ಷದಷ್ಟು ಜನಸಂಖ್ಯೆ ಇದೆ. ಜಿಲ್ಲಾಡಳಿತದ ಮಾಹಿತಿಯಂತೆ ಒಟ್ಟು  ೧೭ ಲಕ್ಷದ ೯೬ ಸಾವಿರದ ೮೨೬ ನೊಂದಾಯಿತ ಮತದಾರರಿದ್ದಾರೆ. ಈ ಪೈಕಿ ೮ ಲಕ್ಷದ ೭೭ ಸಾವಿರದ ೪೩೮ ಪುರುಷರು, ೯ ಲಕ್ಷದ ೧೯ ಸಾವಿರದ ೩೨೧ ಮಹಿಳಾ ಮತದಾರರು ಮತ್ತು ೬೭ ತೃತೀಯ ಲಿಂಗಿ ಮತದಾರರಿದ್ದಾರೆ. ೮೫ ವರ್ಷ ಮೇಲ್ಪಟ್ಟ ೨೧ ಸಾವಿರದ ೮೮೭ ಮತದಾರರು ಮತ್ತು ೩೫ ಸಾವಿರದ ೬೮೯ ಯುವ ಮತದಾರರಿದ್ದಾರೆ. ಕ್ಷೇತ್ರದಲ್ಲಿ ಈ ಬಾರಿ ೭೨ ಲಕ್ಷದ ೩೬೬ ಮತದಾರರ ಹೆಚ್ಚಳವಾಗಿದೆ. ಪುರುಷರಿಗಿಂತ ೪೧ ಸಾವಿರದ ೮೮೩ ಮಹಿಳಾ ಮತದಾರರು ಹೆಚ್ಚು ಇದ್ದಾರೆ.  ೨೦೧೯ರ ಚುನಾವಣೆ ವೇಳೆ ೧ ಸಾವಿರದ ೮೬೧ ಮತಗಟ್ಟೆಗಳಿದ್ದು, ಈ ಬಾರಿ ಒಟ್ಟು ೧ ಸಾವಿರದ ೮೭೬ ಮತಗಟ್ಟೆಗಳನ್ನು ತೆರೆಯಲಾಗಿದೆ. ಈ ಕ್ಷೇತ್ರದಲ್ಲಿ ೧೯೯೬ರಿಂದ ೨೦೧೯ರವರೆಗೆ ನಡೆದ ಎಲ್ಲಾ ಲೋಕಸಭಾ ಚುನಾವಣೆಯಲ್ಲಿ ಶೇಕಡ ೭೦ಕ್ಕೂ ಅಧಿಕ ಪ್ರಮಾಣದಲ್ಲಿ ಮತ ಚಲಾವಣೆಯಾಗಿರುವುದು ಗಮನಿಸಬೇಕಾದ ಅಂಶ. ಈ ಬಾರಿಯೂ ಮತದಾನ ಹೆಚ್ಚಳಕ್ಕೆ ಜಿಲ್ಲಾಡಳಿತ ಸರ್ವ ಪ್ರಯತ್ನ ಮುಂದುವರಿಸಿದೆ. ದಕ್ಷಿಣಕನ್ನಡ ಮತಕ್ಷೇತ್ರದಲ್ಲಿ ಏಪ್ರಿಲ್ ೨೬ರಂದು ಚುನಾವಣೆ ನಡೆಯಲಿದೆ. ಏಪ್ರಿಲ್ ೪ ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿದ್ದು, ಏಪ್ರಿಲ್ ೫ರಂದು ನಾಮಪತ್ರ ಪರಿಶೀಲನೆ ನಡೆಯಲಿದೆ. ಏಪ್ರಿಲ್ ೮ ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ. ಜೂನ್ ೬ರವರೆಗೆ ನೀತಿ ಸಂಹಿತೆ ಜಾರಿಯಲ್ಲಿರಲಿದೆ. ಚುನಾವಣೆ ಭದ್ರತೆ ಹಿನ್ನೆಲೆಯಲ್ಲಿ ಮಂಗಳೂರು ನಗರ ಪೊಲೀಸ್ ವ್ಯಾಪ್ತಿಯಲ್ಲಿ ೩ ಅಂತಾರಾಜ್ಯ ಗಡಿಗಳು ಸೇರಿದಂತೆ ೧೨ ಚೆಕ್‌ಪೋಸ್ಟ್‌ಗಳನ್ನು ರಚಿಸಲಾಗಿದೆ. ಅಕ್ರಮ ಹಣ ಅಥವಾ ಮದ್ಯ ರವಾನೆ ಬಗ್ಗೆ ನಿಗಾ ಇರಿಸಲಾಗಿದೆ. ದಕ್ಷಿಣ ಕನ್ನಡ  ಜಿಲ್ಲಾ ಪೊಲೀಸ್ ವ್ಯಾಪ್ತಿಯಲ್ಲಿ ೭ ಅಂತಾರಾಜ್ಯ ಗಡಿಗಳು ಸೇರಿದಂತೆ ೧೧ ಚೆಕ್‌ಪೋಸ್ಟ್‌ಗಳನ್ನು ರಚಿಸಲಾಗಿದೆ.

********

<><*<><>*><>

ಇಂದು ದೇಶಾದ್ಯಂತ ಹೋಳಿ ಹಬ್ಬದ ಸಡಗರ. ಬಣ್ಣಗಳ ಹಬ್ಬ ಎಲ್ಲರ ಜೀವನದಲ್ಲಿ ಸಂತಸ, ಸಾಮರಸ್ಯ ತರಲಿ ಎಂದು ಗಣ್ಯರು ಹಾರೈಸಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಮಂತ್ರಿ

ನರೇಂದ್ರ ಮೋದಿ, ಹಬ್ಬದ ಶುಭಾಶಯ ಕೋರಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಸಂಭ್ರಮದ ಹೋಳಿ ಹಬ್ಬ ಎಲ್ಲರ ಬದುಕಿನಲ್ಲಿ ಸುಖ, ಶಾಂತಿ, ಸಮೃದ್ಧಿಯನ್ನು ತುಂಬಲಿ. ವಿವಿಧ ಜಾತಿ, ಧರ್ಮ, ಸಂಸ್ಕೃತಿಗಳ ಜನರು ತಮ್ಮ ನಡುವಿನ ವೈರುಧ್ಯಗಳನ್ನು ಮೀರಿ ಹೋಳಿಯ ಬಣ್ಣಗಳಂತೆ ಮಿಳಿತಗೊಳ್ಳಲಿ. ದ್ವೇಷ ಅಳಿದು ಸ್ನೇಹ, ಸೌಹಾರ್ದತೆಯ ಬಣ್ಣಗಳು ಎಲ್ಲರ ಬದುಕನ್ನಾವರಿಸಲಿ ಎಂದು ಸಾಮಾಜಿಕ ಮಾಧ್ಯಮದ ಮೂಲಕ ಶುಭಾಶಯ ಕೋರಿದ್ದಾರೆ. ನಾಡಿನ ಸಮಸ್ತ ಜನತೆಗೆ ಹೋಳಿ ಹಬ್ಬದ ಹಾರ್ದಿಕ ಶುಭಾಶಯಗಳು. ರಾಜ್ಯದಲ್ಲಿ ನೀರಿನ ಸಂಕಷ್ಟವಿದೆ. ಹೋಳಿ ಆಚರಣೆಗೆ ನೀರಿನ ಬಳಕೆಗೆ ಮಿತಿ ಇರಲಿ, ಈ ಬಾರಿ ಬಣ್ಣಗಳ ಬದಲು ಹೂವಿನ ಓಕುಳಿ ಆಡುತ್ತಾ ಸಂಭ್ರಮಿಸೋಣ. ನೀರು ಉಳಿಸಿ ಜವಾಬ್ದಾರಿಯುತ ಪ್ರಜೆಗಳಾಗೋಣ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಂದೇಶ ನೀಡಿದ್ದಾರೆ. ಉತ್ತರಕನ್ನಡ ಜಿಲ್ಲೆಯಲ್ಲಿ ಹೋಳ ಹಬ್ಬವನ್ನು ಸಂಭ್ರಮದಿಂದ ಆಚರಿಸಲಾಯಿತು. ಬೆಳಗ್ಗಿನಿಂದಲೇ ಜನರು ಪರಸ್ಪರ ಬಣ್ಣ ಹಂಚಿ ಶುಭಾಶಯ ವಿನಿಮಯ ಮಾಡಿಕೊಂಡರು. ಸಾವಿರಾರು ಸಂಖ್ಯೆಯಲ್ಲಿ ಕಡಲ ತೀರದಲ್ಲಿ ಜನ ಸೇರಿದ್ದರು. ಸೂಕ್ತ ಬಂದೋಬಸ್ತ್ ಮಾಡಲಾಗಿತ್ತು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಉತ್ತರ ಭಾರತ ಮೂಲದ ಜನರು ಬೆಳಗಿನಿಂದಲೇ ಹೋಳಿ ಸಡಗರದಲ್ಲಿ ಪಾಲ್ಗೊಂಡರು. ಶುಭಾಶಯ ವಿನಿಮಯ, ಸಿಹಿ ಹಂಚಿಕೆಯ ದೃಶ್ಯಗಳು ಕಂಡುಬಂದವು. ದಾವಣಗೆರೆ ಜಿಲ್ಲೆಯಲ್ಲೂ ಸಂಭ್ರಮದಿಂದ ಹೋಳಿ ಆಚರಿಸಲಾಯಿತು. ನಗರದ ಪ್ರಮುಖ ವೃತ್ತದಲ್ಲಿ ಸಾವಿರಾರು ಜನರು ಸಾಂಪ್ರದಾಯಿಕ ಮಡಿಕೆ ಹೊಡೆಯುವ ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ಹಬ್ಬದ ಸಂಭ್ರಮಕ್ಕೆ ಯಾವುದೇ ಅಡ್ಡಿಯಾಗದಂತೆ ಸೂಕ್ತ ಬಂದೋಬಸ್ತ್ ಮಾಡಲಾಗಿದೆ.

**<><*<><>*><>**

ಐಪಿಎಲ್ ಕ್ರಿಕೆಟ್ ಪಂದ್ಯಾವಳಿಯಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಮಗಳೂರು ಮತ್ತು ಪಂಜಾಬ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಸಂಜೆ ೭.೩೦ ಕ್ಕೆ ಆರಂಭವಾಗಲಿದೆ.